ಮುದಿಮಡಗು ಗ್ರಾಮ ಪಂಚಾಯತ್‌ನಲ್ಲಿ ಜಮಾಬಂದಿ ನಡೆದಿರುವ ಬಗ್ಗೆ ವರದಿಯನ್ನು ಸಲ್ಲಿಸಲು ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರು ಸಲ್ಲಿಸಿದ 2015–16ನೇ ಸಾಲಿನ ಜಮಾಬಂದಿ ಮಾಡಿರುವ ಬಗ್ಗೆ ವರದಿಯನ್ನು ಸಲ್ಲಿಸಿದ್ದಾರೆ.

4. ಎರಡನೇ (2ನೇ) ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ –

ತಾವು ದಿನಾಂಕ:17/03/14 ರಿಂದ ಮುದಿಮಡಗು ಗ್ರಾಮ ಪಂಚಾಯತ್‌ನಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದು, 2016–17ನೇ ಸಾಲಿನಲ್ಲಿ ಶ್ರೀನಿವಾಸಪುರ ತಾಲ್ಲೂಕನ್ನು ಸರ್ಕಾರವು ವಸತಿ ಯೋಜನೆಯಲ್ಲಿ ಪೈಲಟ್ ಪ್ರಾಜೆಕ್ಟಾಗಿ ಪರಿಗಣಿಸಿ, ಗ್ರಾಮ ಪಂಚಾಯತ್‌ಗೆ ಸುಮಾರು 540 ಮನೆಗಳನ್ನು ಮಂಜೂರು ಮಾಡಿದ್ದ ಕಾರಣ ಹಾಗೂ ಸ್ವಚ್ಛ ಭಾರತ ಮಿಷನ್ ಯೋಜನೆಯಡಿಯಲ್ಲಿ ಸಂಪೂರ್ಣ ಬಯಲು ಬಹಿರ್ದೆಸೆ ಮುಕ್ತ ತಾಲ್ಲೂಕನ್ನಾಗಿ ಘೋಷಣೆ ಮಾಡಿರುವ ಕಾರಣ, ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಹೆಚ್ಚಿನ ಕೆಲಸ ನಿರ್ವಹಿಸಿರುವುದರಿಂದ ಮತ್ತು ಸಿಬ್ಬಂದಿ ಕೊರತೆಯಿಂದ ಜಮಾಬಂದಿ ಕಾರ್ಯವನ್ನು ಕಾಲಮಿತಿಯಲ್ಲಿ ಮಾಡಲು ವಿಳಂಬವಾಗಿದೆ. ದಿನಾಂಕ:11/12/17ರ ಜ್ಞಾಪನದಲ್ಲಿ 1ನೇ ಎದುರುದಾರರು ಪಂಚಾಯತ್‌ನ ವಾರ್ಷಿಕ ಜಮಾಬಂದಿ ನಡೆಸಲು ದಿನಾಂಕ:26/12/17ಕ್ಕೆ ದಿನಾಂಕ ನಿಗಧಿಪಡಿಸಿ ನೋಡಲ್ ಅಧಿಕಾರಿಯನ್ನು ನಿಯೋಜಿಸಿದ್ದಾರೆ. ಆದರೆ, ಗ್ರಾಮ ಪಂಚಾಯತ್ ಅಧ್ಯಕ್ಷರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷರ ಹುದ್ದೆಗೆ ದಿನಾಂಕ:18/01/18ರಂದು ಚುನಾವಣೆ ನಡೆದು ಅಧ್ಯಕ್ಷರ ಆಯ್ಕೆ ನಂತರ ದಿನಾಂಕ:29/01/18ರಂದು ವಾರ್ಷಿಕ ಜಮಾಬಂದಿಯನ್ನು ಕೈಗೊಂಡಿದೆಯೆಂದು ಹೇಳುತ್ತಾ 2015–16ನೇ ಸಾಲಿನ ಜಮಾಬಂದಿಯ ವರದಿಯನ್ನು ಸಲ್ಲಿಸಿದ್ದಾರೆ.

5. ದೂರಿನ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ರವರಿಂದ ವರದಿಯನ್ನು ಕೇಳಲಾಗಿ, ಸದರಿಯವರು 2015–16 ಮತ್ತು 2016–17ನೇ ಸಾಲಿನ ವಾರ್ಷಿಕ ಜಮಾಬಂದಿ ವರದಿಯ ಪ್ರತಿಗಳನ್ನು ಸಲ್ಲಿಸಿದ್ದಾರೆ.

6. ಎದುರುದಾರರ ಆಕ್ಷೇಪಣೆಗಳಿಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ಪ್ರತ್ಯುತ್ತರ ಸಲ್ಲಿಸಿದ್ದಾರೆ.

7. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

